## ನೇಮಕಾತಿ ಪ್ರಾಧಿಕಾರಿ ಹಾಗೂ ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಬೆಂಗಳೂರು

ನಂ.8, ಎಂ.ಎಸ್.ಬಿ.-1 ಕನ್ನಿಂಗ್‌ಹ್ಯಾಮ್ ರಸ್ತೆ, ಬೆಂಗಳೂರು-52, ದೂರವಾಣಿ ಸಂಖ್ಯೆ: 080-22265755,

ಇ-ಮೇಲ್: **edkreis@rediff.com**


## ನೇಮಕಾತಿ ಆದೇಶ

ವಿಷಯ: ಮಾನ್ಯ ಕರ್ನಾಟಕ ಉಚ್ಛ ನ್ಯಾಯಾಲಯದ ರಿಟ್ ಪಿಟಿಷನ್/ರಿಟ್ ಅಪೀಲುಗಳ ತೀರ್ಪುಗಳಂತೆ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ, ಅಧೀನದ ವಸತಿ ಶಾಲೆಗಳಲ್ಲಿ ಹೊರಸಂಪನ್ಮೂಲದಿಂದ ನೇಮಕಗೊಂಡು ಕಾರ್ಯನಿರ್ವಹಿಸುತ್ತಿದ್ದ ಸಹ ಶಿಕ್ಷಕರುಗಳಿಗೆ ಸೇವಾ ಕೃಪಾಂಕ ಪರಿಗಣಿಸಿ, ಆಯ್ಕೆಯಾದ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡುವ ಬಗ್ಗೆ.

ಉಲ್ಲೇಖ:
1. ಮಾನ್ಯ ಉಚ್ಛ ನ್ಯಾಯಾಲಯದ ರಿಟ್ ಅರ್ಜಿ ಸಂಖ್ಯೆ: 20204-20364/2011 ಮತ್ತು ಇತರ ಸಂಯೋಜಿತ ಪ್ರಕರಣಗಳ ತೀರ್ಮಾನ ದಿ:13.07.2012.
2. ಮಾನ್ಯ ಕರ್ನಾಟಕ ಉಚ್ಛ ನ್ಯಾಯಾಲಯದ ರಿಟ್ ಮೇಲ್ಮನವಿ ಅರ್ಜಿ ಸಂಖ್ಯೆ: 5127/2012 ಮತ್ತು ಇತರೆ ಸಂಯೋಜಿತ ಪ್ರಕರಣಗಳ ತೀರ್ಮಾನ ದಿ:28.2.2013 ಮತ್ತು ರಿಟ್ ಅರ್ಜಿ ಸಂಖ್ಯೆ: 958-988/2015, ದಿ: 12/02/2015
3. ಮಾನ್ಯ ಕರ್ನಾಟಕ ಉಚ್ಛ ನ್ಯಾಯಾಲಯದ, ಧಾರವಾಡ ಪೀಠದ ಮೇಲ್ಮನವಿ ಅರ್ಜಿ ಸಂಖ್ಯೆ: 31346/2012 ಮತ್ತು ಇತರ ಸಂಯೋಜಿತ ಪ್ರಕರಣಗಳ ತೀರ್ಮಾನ ದಿ: 21.3.2013.
4. ಮಾನ್ಯ ಉಚ್ಛ ನ್ಯಾಯಾಲಯದ ರಿಟ್ ಅರ್ಜಿ ಸಂಖ್ಯೆ: 113076/2014 ಮತ್ತು ಸಂಯೋಜಿತ ರಿಟ್ ಅರ್ಜಿಗಳಾದ 100572/2015 ಮತ್ತು 100573-582/2015, ದಿ: 21.1.2015.
5. ಈ ಕಛೇರಿಯ ಆಯ್ಕೆಪಟ್ಟಿ ಪ್ರಕಟಣೆ ಸಂಖ್ಯೆ: ಕವಶಿಸಸ/ಆಡಳಿತ/ಹೊನೇ/ಸಿ.ಆರ್-01/2013-14, ದಿನಾಂಕ:19/10/2015
6. ಈ ಕಛೇರಿಯ ನೇಮಕಾತಿ ಆದೇಶದ ಸಮ ಸಂಖ್ಯೆ ದಿನಾಂಕ: 30/01/2016, 06/02/2016, 28/03/2016 ಮತ್ತು 21/06/2016

*****

**ಪ್ರಸ್ತಾವನೆ:-**

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಮತ್ತು ಉಲ್ಲೇಖ (1) ರಿಂದ (4)ರ ವರೆಗಿನ ಮಾನ್ಯ ಕರ್ನಾಟಕ ಉಚ್ಛ ನ್ಯಾಯಾಲಯಗಳ ತೀರ್ಪುಗಳನ್ವಯ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಬೆಂಗಳೂರು ಇದರ ಅಧೀನದಲ್ಲಿರುವ ಮೊರಾರ್ಜಿ ದೇಸಾಯಿ/ಕಿತ್ತೂರು ರಾಣಿ ಚೆನ್ನಮ್ಮ/ಏಕಲವ್ಯ ಮಾದರಿ ವಸತಿ ಶಾಲೆಗಳಲ್ಲಿ ಹೊರಸಂಪನ್ಮೂಲ ಏಜೆನ್ಸಿವತಿಯಿಂದ/ಜಿಲ್ಲೆಗಳ ಜಿಲ್ಲಾ ಪಂಚಾಯಿತಿಗಳಿಂದ ತಾತ್ಕಾಲಿಕವಾಗಿ ನೇಮಕಗೊಂಡು ಕಾರ್ಯನಿರ್ವಹಿಸುತ್ತಿದ್ದ ಸಹ

ಶಿಕ್ಷಕರುಗಳಿಗೆ ಸೇವಾ ಕೃಪಾಂಕ ನೀಡಿ, ಅರ್ಹರಾದ ಅಭ್ಯರ್ಥಿಗಳ ಆಯ್ಕೆಪಟ್ಟಿಯನ್ನು ಕೆಲವು ನಿಬಂಧನೆಗಳಿಗೆ ಒಳಪಟ್ಟು ಉಲ್ಲೇಖ (5) ರನ್ವಯ ಪ್ರಕಟಿಸಲಾಗಿತ್ತು. ಸದರಿ ಪ್ರಕಟಿತ ಆಯ್ಕೆಪಟ್ಟಿಯ ನಿಬಂಧನೆಗಳನುಸಾರ ಮೂಲದಾಖಲೆಗಳ ಪರಿಶೀಲನೆ ನಡೆಸಿ, ಜಾತಿ ಸಿಂಧುತ್ವ ಪ್ರಮಾಣ ಪತ್ರ, ಪೋಲೀಸ ವರದಿ ಹಾಗೂ ವೈದ್ಯಕೀಯ ಪ್ರಮಾಣ ಪತ್ರಗಳು ಸ್ವೀಕೃತವಾಗಿದ್ದ ಅಭ್ಯರ್ಥಿಗಳಿಗೆ ಈ ಕಛೇರಿಯ ಉಲ್ಲೇಖ (6) ರಲ್ಲಿ ತಿಳಿಸಿರುವ ಆದೇಶಗಳಲ್ಲಿ ನೇಮಕಾತಿ ಆದೇಶ ನೀಡಲಾಗಿದೆ. ಆ ತರುವಾಯ ಇನ್ನುಳಿದ ಈ ಕೆಳಕಂಡ ಅಭ್ಯರ್ಥಿಗಳ ಜಾತಿ ಸಿಂಧುತ್ವ ಪ್ರಮಾಣಪತ್ರ, ಪೋಲೀಸ್ ವರದಿ ಮತ್ತು ವೈದ್ಯಕೀಯ ಪ್ರಮಾಣಪತ್ರಗಳು ಸ್ವೀಕೃತವಾಗಿದ್ದು, ಈ ಮುಂದೆ ತಿಳಿಸಿದ ನಿಬಂಧನೆಗೊಳಪಟ್ಟು ನೇಮಕಾತಿ ಆದೇಶ ನೀಡಿ ಸ್ಥಳನಿಯುಕ್ತಿಗೊಳಿಸಲು ಈ ಕೆಳಕಂಡ ಆದೇಶ.

**::ಆದೇಶ::**

**ಸಂಖ್ಯೆ: ಕವಶಿಸಸ/ಆಡಳಿತ/ಹೊನೇ/ಸಿ.ಆರ್-01/2013-14** **ದಿನಾಂಕ: 08/07/2016**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದ ರಿಟ್ ಪಿಟಿಷನ್/ರಿಟ್ ಅಪೀಲುಗಳ ತೀರ್ಪುಗಳಂತೆ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ, ಅಧೀನದ ವಸತಿ ಶಾಲೆಗಳಲ್ಲಿ ಹೊರಸಂಪನ್ಮೂಲದಿಂದ ನೇಮಕಗೊಂಡು ಕಾರ್ಯನಿರ್ವಹಿಸುತ್ತಿದ್ದ ಈ ಕೆಳಕಂಡ ಗಣಿತ ಸಹ ಶಿಕ್ಷಕರುಗಳಿಗೆ ಅವರ ಹೆಸರುಗಳ ಮುಂದೆ ಸೂಚಿಸಿರುವಂತೆ ತಕ್ಷಣದಿಂದಲೇ ಜಾರಿಗೆಬರುವಂತೆ ತಾತ್ಕಾಲಿಕವಾಗಿ ನೇಮಕಾತಿಮಾಡಿ, ಮುಂದಿನ ಆದೇಶವಾಗುವವರೆಗೆ ತಾತ್ಕಾಲಿಕವಾಗಿ ಸ್ಥಳನಿಯುಕ್ತಿಗೊಳಿಸಿ ಆದೇಶಿಸಲಾಗಿದೆ.

**ಗಣಿತ ಶಿಕ್ಷಕರು, ವೇತನ ಶ್ರೇಣಿ (17,650-32,000)**

| ಕ್ರ.ಸಂ. | ಅಭ್ಯರ್ಥಿಯ ಹೆಸರು ಮತ್ತು ವಿಳಾಸ | ಆಯ್ಕೆಯಾದ ಪ್ರವರ್ಗ | ತಾತ್ಕಾಲಿಕವಾಗಿ ನೇಮಕಾತಿಯಾದ ಹುದ್ದೆ ಮತ್ತು ಸ್ಥಳ |
|---|---|---|---|
| 1 | **ವಿದ್ಯಾ ಕೆ.ಸಿ., ಕೋಂ.** ವಿನೋದಕುಮಾರ್ ಹೆಚ್.ಆರ್., ಋಷಿನಿಲಯ, ಹಳೆಪೇಪರ್ ಮಿಲ್ ಮುಂಭಾಗ, ಹಾರಂಗಿ ರಸ್ತೆ, ಕುಶಾಲನಗರ, ಕೊಡಗು ಜಿಲ್ಲೆ | 2-ಎ | **ಗಣಿತ ಸಹ ಶಿಕ್ಷಕರು** 110-ಮೊರಾರ್ಜಿ ದೇಸಾಯಿ ವಸತಿ ಶಾಲೆ (ಪ.ವ.), ಕಗ್ಗುಂಡಿ, ಪಿರಿಯಾಪಟ್ಟಣ ತಾಲ್ಲೂಕು, ಮೈಸೂರು ಜಿಲ್ಲೆ |
| 2 | **ಸುಧಾ ಬಿನ್ ಸೂಗಣ್ಣ ಬೆಂಡೆಬೆಂಬಳ್ಳಿ,** ಬೆಂಡೆಬೆಂಬಳ್ಳಿ ಹೋಬಳಿ, ಶಹಪುರ ತಾಲ್ಲೂಕು, ಯಾದಗಿರಿ ಜಿಲ್ಲೆ | 3-ಬಿ | **ಗಣಿತ ಸಹ ಶಿಕ್ಷಕರು** 354-ಮೊರಾರ್ಜಿ ದೇಸಾಯಿ ವಸತಿ ಶಾಲೆ (ಪ.ಜಾ.), ಮನ್ನಳ್ಳಿ, (ರಾಂಪುರ ಕಾಲೋನಿ) ಬೀದರ್ ತಾಲ್ಲೂಕು, ಬೀದರ್ ಜಿಲ್ಲೆ |
| 3 | **ಶುಭ ಟಿ.ಆರ್.,** ಬಿನ್ ರೇಣುಕಪ್ಪ ಟಿ.ಸಿ., ಹರದಗೆರೆ, ಗುಬ್ಬಿ ತಾಲ್ಲೂಕು, ತುಮಕೂರು ಜಿಲ್ಲೆ | 3-ಬಿ | **ಗಣಿತ ಸಹ ಶಿಕ್ಷಕರು** 396-ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆ (ಪ.ವ.), ಚಳ್ಳಕೆರೆ, ಚಳ್ಳಕೆರೆ ತಾಲ್ಲೂಕು, ಚಿತ್ರದುರ್ಗ ಜಿಲ್ಲೆ |
| 4 | **ಪ್ರೇಮಕುಮಾರಿ ಎಸ್.,** ಬಿನ್ ಶಿವನಾಗಪ್ಪ, ವಕ್ಕಲಗೆರೆ, ಎಗಟಿ ಹೋಬಳಿ, ಕಡೂರು ತಾಲ್ಲೂಕು, ಚಿಕ್ಕಮಗಳೂರು ಜಿಲ್ಲೆ | 3-ಬಿ | **ಗಣಿತ ಸಹ ಶಿಕ್ಷಕರು** 420-ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆ (ಪ.ಜಾ.), ಹುಣಸೂರು, ಹುಣಸೂರು ತಾಲ್ಲೂಕು, ಮೈಸೂರು ಜಿಲ್ಲೆ |
| 5 | **ದಾಕ್ಷಾಯಿಣಿ ಎಸ್.,** ಬಿನ್. ರೇಣುಕಸ್ವಾಮಿ, ವಾರ್ಡ್ ನಂ.4, ದೊಡ್ಡಪೇಟೆ, ಕಸಬಾ ಹೋಬಳಿ, ಚಿತ್ರದುರ್ಗ ಜಿಲ್ಲೆ | 3-ಬಿ | **ಗಣಿತ ಸಹ ಶಿಕ್ಷಕರು** 343-ಮೊರಾರ್ಜಿ ದೇಸಾಯಿ ವಸತಿ ಶಾಲೆ (ಹಿಂ.ವ.), ಮೀನಹಳ್ಳಿ, ಬಳ್ಳಾರಿ ತಾಲ್ಲೂಕು, ಬಳ್ಳಾರಿ ಜಿಲ್ಲೆ |
| 6 | **ಭುವನೇಶ್ವರಿ ಹೆಚ್.ಎಸ್.,** ಬಿನ್. ಶಿವಸ್ವಾಮಿ ಹೆಚ್.ಪಿ., ಹುಸ್ಕೂರು ಗ್ರಾಮ, ಹುಲ್ಲಹಳ್ಳಿ ಹೋಬಳಿ, ನಂಜನಗೂಡು ತಾಲ್ಲೂಕು, ಮೈಸೂರು ಜಿಲ್ಲೆ | 3-ಬಿ | **ಗಣಿತ ಶಿಕ್ಷಕರು** 198-ಮೊರಾರ್ಜಿ ದೇಸಾಯಿ ವಸತಿ ಶಾಲೆ (ಹಿಂ.ವ.), ಹೂಗ್ಯಂ, ಕೊಳ್ಳೇಗಾಲ ತಾಲ್ಲೂಕು, ಚಾಮರಾಜನಗರ ಜಿಲ್ಲೆ |

| | | | |
|---|---|---|---|
| 7 | **ಸಂಧ್ಯಾ ಹೆಚ್.ವಿ.,** ಕೋಂ. ಹರೀಶ್ ಪಂಡಿತ್ ರಾವಳನಾಥ, ಕೆ.ಹೆಚ್.ಬಿ. ಕಾಲೋನಿ, 2ನೇ ಹಂತ ಗೋಪಾಲಗೌಡ ಬಡಾವಣೆ, ಶಿವಮೊಗ್ಗ | ಸಾಮಾನ್ಯ | **ಗಣಿತ ಸಹ ಶಿಕ್ಷಕರು** 159-ಮೊರಾರ್ಜಿ ದೇಸಾಯಿ ವಸತಿ ಶಾಲೆ (ಪ.ಜಾ.), ಎಸ್. ಅಂಕನಹಳ್ಳಿ, ಹೊಳೆನರಸೀಪುರ ತಾಲ್ಲೂಕು, ಹಾಸನ ಜಿಲ್ಲೆ |
| 8 | **ಶ್ರೀಧರ ಬಿನ್. ಶ್ಯಾಮರಾವ್,** ಶ್ರೀಧರ ನಿಲಯ, ಈಶ್ವರ ನಗರ, ಕ.ಇ.ಬಿ. ಹಿಂದೆ, ಅಳಂದ, ಕಲಬುರಗಿ ಜಿಲ್ಲೆ | ಸಾಮಾನ್ಯ | **ಗಣಿತ ಸಹ ಶಿಕ್ಷಕರು 341-ಮೊರಾರ್ಜಿ ದೇಸಾಯಿ ವಸತಿ ಶಾಲೆ (ಪ.ವ), ಬನ್ನಿಹಟ್ಟಿ, ಸಂಡೂರು ತಾಲ್ಲೂಕು, ಬಳ್ಳಾರಿ ಜಿಲ್ಲೆ** |

**ಈ ನೇಮಕಾತಿಯು ಕೆಳಕಾಣಿಸಿರುವ ಷರತ್ತುಗಳಿಗೆ ಒಳಪಟ್ಟಿರುತ್ತದೆ.**

1. ನೇಮಕಾತಿಯಾದ ಅಭ್ಯರ್ಥಿಯು ಸ್ಥಳನಿಯುಕ್ತಿಗೊಳಿಸಿದ ಸ್ಥಳದಲ್ಲಿ ಆದೇಶ ತಲುಪಿದ 15 ದಿನಗಳೊಳಗಾಗಿ ಕರ್ತವ್ಯಕ್ಕೆ ಹಾಜರಾಗತಕ್ಕದ್ದು. ಇಲ್ಲವಾದಲ್ಲಿ ಈ ಆದೇಶ ತಂತಾನೇ ರದ್ದುಗೊಳ್ಳುತ್ತದೆ.
2. ಈ ನೇಮಕಾತಿ ಆದೇಶವು ಭವಿಷ್ಯದಲ್ಲಿ ಬರಬಹುದಾದ ಮಾನ್ಯ ಉಚ್ಛ ನ್ಯಾಯಾಲಯಗಳ ತೀರ್ಪುಗಳು ಹಾಗೂ ಸರ್ಕಾರದ ತೀರ್ಮಾನಗಳಿಗೊಳಪಟ್ಟಿರುತ್ತದೆ.
3. ಈ ನೇಮಕಾತಿ ಆದೇಶವು ಅಭ್ಯರ್ಥಿಗಳ ಶೈಕ್ಷಣಿಕ ಮೂಲದಾಖಲಾತಿಗಳ ನೈಜತೆ ಪರಿಶೀಲನೆ ಸಮಯದಲ್ಲಿ ವ್ಯತ್ಯಾಸ ಕಂಡುಬಂದಲ್ಲಿ; ಅಂತಹ ಅಭ್ಯರ್ಥಿಗಳ ಆಯ್ಕೆಯು ತಂತಾನೇ ರದ್ದುಗೊಳ್ಳುವುದಲ್ಲದೇ, ಅಂತಹ ಅಭ್ಯರ್ಥಿಗಳ ವಿರುದ್ಧ ಕ್ರಿಮಿನಲ್ ಮೊಕದ್ದಮೆಯನ್ನು ಹೂಡಲಾಗುವುದು.
4. ಸೇವಾ ಕೃಪಾಂಕ ಪರಿಗಣನೆಗಾಗಿ ಅಭ್ಯರ್ಥಿಗಳು ಹೊರಸಂಪನ್ಮೂಲ ಏಜೆನ್ಸಿಯಿಂದ ಪಡೆದ ನೇಮಕಾತಿ ಆದೇಶ, ಶಾಲಾ ಹಾಜರಾತಿ ವಹಿ, ವೇತನ ಬಟವಾಡೆ ವಿವರಗಳು, ವಯೋಮಾನಕ್ಕೆ ಸಂಬಂಧಿಸಿದ ದಾಖಲೆಗಳು ಹಾಗೂ ಇನ್ನಿತರ ಸೇವಾ ದಾಖಲಾತಿಗಳು ಭವಿಷ್ಯದಲ್ಲಿ ನೈಜವಲ್ಲವೆಂದು ಕಂಡುಬಂದಲ್ಲಿ; ಅಂತಹ ಅಭ್ಯರ್ಥಿಗಳ ನೇಮಕಾತಿಯು ತಂತಾನೇ ರದ್ದುಗೊಳ್ಳುವುದಲ್ಲದೇ, ಅಂತಹ ಅಭ್ಯರ್ಥಿಗಳ ವಿರುದ್ಧ ಕ್ರಿಮಿನಲ್ ಮೊಕದ್ದಮೆಯನ್ನು ಹೂಡಲಾಗುವುದು ಹಾಗೂ ಪಾವತಿಸಿದ ವೇತನವನ್ನು ವಸೂಲುಮಾಡಲಾಗುವುದು.
5. ಈ ಆಯ್ಕೆಪಟ್ಟಿಯು ಮಾನ್ಯ ಉಚ್ಛ ನ್ಯಾಯಾಲಯದ ರಿಟ್ ಅರ್ಜಿ ಸಂಖ್ಯೆ:104065-80/2015 (S-RES) ರ ಹಾಗೂ ಮಾನ್ಯ ಉಚ್ಛ ನ್ಯಾಯಾಲಯಗಳ ಇತರ ಯಾವುದೇ ಅಂತಿಮ ಆದೇಶಗಳಿಗೆ ಒಳಪಟ್ಟಿರುತ್ತದೆ.
6. ಈ ನೇಮಕಾತಿ ಆದೇಶವನ್ನು ಪಡೆಯುವ ಮೊದಲು ಅಭ್ಯರ್ಥಿಯು ತಾನು ಒದಗಿಸಿರುವ ಮಾಹಿತಿಗಳು ಸತ್ಯವೆಂದು Affidavit ಸಲ್ಲಿಸತಕ್ಕದ್ದು. ಒಂದು ವೇಳೆ ಒದಗಿಸಿದ ಮಾಹಿತಿಗಳು ಭವಿಷ್ಯದಲ್ಲಿ ಕೃತ್ರಿಮ ಅಥವಾ ತಪ್ಪು ಎಂದು ಕಂಡುಬಂದಲ್ಲಿ ಈ ನೇಮಕಾತಿಯು ತಂತಾನೇ ರದ್ದುಗೊಳ್ಳುವುದಲ್ಲದೇ, ಅಂತಹ ತಪ್ಪುಗಳಿಗೆ ಅಭ್ಯರ್ಥಿಯೇ ಸಂಪೂರ್ಣ ಹೊಣೆಗಾರರಾಗಿರುತ್ತಾರೆ.
7. ಸರ್ಕಾರದ ಆದೇಶ ಸಂಖ್ಯೆ: 3767 ಪಿ.ಟಿ.ಎನ್. ದಿನಾಂಕ: 20.07.1990 ರಂತೆ ಅಭ್ಯರ್ಥಿಯ ಪೂರ್ವ ನಡತೆ ತೃಪ್ತಿಕರವಾಗಿರತಕ್ಕದ್ದು ಹಾಗೂ ಆ ಬಗ್ಗೆ ಸನ್ನಡತೆಯ ಪ್ರಮಾಣ ಪತ್ರವನ್ನು ಪತ್ರಾಂಕಿತ ಅಧಿಕಾರಿಗಳಿಂದ ಪಡೆದು ಸಲ್ಲಿಸತಕ್ಕದ್ದು.
8. ಅಭ್ಯರ್ಥಿಯ ಆಯ್ಕೆಯು ಯಾವುದೇ ಲೋಪದೋಷಗಳಿಂದೊಡಗೂಡಿದೆ ಎಂದು ಮುಂಬರುವ ದಿನಗಳಲ್ಲಿ ಕಂಡುಬಂದಲ್ಲಿ; ಯಾವುದೇ ಮುನ್ಸೂಚನೆ ನೀಡದೇ ನೇಮಕಾತಿಯನ್ನು ರದ್ದುಪಡಿಸಲಾಗುವುದು.
9. ನಿಮಗೆ ಕೃಪಾಂಕವನ್ನು ನೀಡಿ ನೇಮಕಾತಿ ಮಾಡಿಕೊಳ್ಳುತ್ತಿರುವುದರಿಂದ, ಶೈಕ್ಷಣಿ ಗುಣಮಟ್ಟವನ್ನು ಕಾಯ್ದುಕೊಳ್ಳುವ ಉದ್ದೇಶದಿಂದ, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘವು ಏರ್ಪಡಿಸುವ Teachers Eligibility Test (TET) ಮಾದರಿಯ ಪರೀಕ್ಷೆಯಲ್ಲಿ ಉತ್ತೀರ್ಣರಾದ ನಂತರವೇ ನಿಮ್ಮ ಖಾಯಂ ಪೂರ್ವ ಅವಧಿಯನ್ನು ಘೋಷಿಸಲಾಗುವುದು.